ಕರ್ನಾಟಕ ಸರ್ಕಾರ

ಮಕ್ಕಳ ರಕ್ಷಣಾ ನಿರ್ದೇಶನಾಲಯ

ಮೂರನೇ ಮಹಡಿ, ವಿಶ್ವೇಶ್ವರಯ್ಯ ಮಿನಿ ಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001

**E-mail ID: icps.kar@gmail.com**


ಸಂಖ್ಯೆ: ಕೆಎಸ್ಐಸಿಪಿಎಸ್/ಆ.ಸ-15/2020-21

ದಿನಾಂಕ:01.02.2021

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಎಲ್ಲಾ ಜಿಲ್ಲೆಗಳು.

ಮಾನ್ಯರೆ,

ವಿಷಯ: 13 ಜಿಲ್ಲೆಗಳಿಗೆ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಮತ್ತು ಬಾಲನ್ಯಾಯ ಮಂಡಳಿಗೆ ಸದಸ್ಯರನ್ನು ಆಯ್ಕೆ ಮಾಡಲು ಹೊರಡಿಸಿರುವ ನೋಟಿಫಿಕೇಷನ್‌ನ್ನು ಸಂಬಂಧಿಸಿದ ಕಛೇರಿಗಳ ನೋಟೀಸ್ ಬೋರ್ಡ್‌ಗಳಲ್ಲಿ ಹಾಕಲು ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ನ್ಯೂಸ್ ಆರ್ಟಿಕಲ್ ರೂಪದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವ ಬಗ್ಗೆ

ಉಲ್ಲೇಖ ದಿನಾಂಕ 18.01.2021 ರಂದು ಗೂಗಲ್ ಮೀಟ್ ಮೂಲಕ ನಡೆದ **"ರಾಜ್ಯ ಮಟ್ಟದ ಆಯ್ಕೆ ಸಮಿತಿ"**ಯ 7ನೇ ಸಭೆಯ ನಡವಳಿ ಹಾಗೂ ದಿ: 08.10.2020 ಹಾಗೂ ದಿ:13.10.2020ರಂದು ನಡೆದ 3 & 4ನೇ ಸಭೆಯ ನಡವಳಿಗಳು

*** *** ***

ವಿಷಯಕ್ಕೆ ಸಂಬಂಧಿಸಿದಂತೆ, ದಿ:18.01.2021ರಂದು ನಡೆದ ರಾಜ್ಯ ಮಟ್ಟದ ಆಯ್ಕೆ ಸಮಿತಿಯ 7ನೇ ಸಭೆಯ ನಡವಳಿಯಂತೆ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಬಾಲ ನ್ಯಾಯ ಮಂಡಳಿಗೆ ಸದಸ್ಯರನ್ನು ಆಯ್ಕೆ ಮಾಡಲು 13 ಜಿಲ್ಲೆಗಳಾದ ರಾಮನಗರ, ಶಿವಮೊಗ್ಗ, ಕೋಲಾರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮಂಡ್ಯ, ಮೈಸೂರು, ಕೊಡಗು, ದಕ್ಷಿಣ ಕನ್ನಡ, ಹಾಸನ, ವಿಜಯಪುರ ಮತ್ತು ಗದಗ ಜಿಲ್ಲೆಗಳಿಗೆ **1 : 3 ರಂತೆ ಅರ್ಹ ಅರ್ಜಿಗಳು** ಬಾರದ ಹಿನ್ನೆಲೆಯಲ್ಲಿ ಮತ್ತೊಮ್ಮೆ ಅರ್ಜಿಗಳನ್ನು ಆಹ್ವಾನಿಸಲು ಸಮಿತಿಯು ಸಮ್ಮತಿಸಿದ ಹಿನ್ನೆಲೆಯಲ್ಲಿ ನೋಟಿಫಿಕೇಷನ್ ಹೊರಡಿಸಲಾಗಿದೆ. ಸದರಿ ನೋಟಿಫಿಕೇಷನ್‌ನ್ನು ಸ್ಥಳೀಯ ದಿನಪತ್ರಿಕೆಗಳಲ್ಲಿ ನ್ಯೂಸ್ ಆರ್ಟಿಕಲ್ ರೂಪದಲ್ಲಿ ಪ್ರಚುರಪಡಿಸಲು ಹಾಗೂ ಕೆಳಕಂಡ ಕಛೇರಿಗಳ ನೋಟೀಸ್ ಬೋರ್ಡ್‌ಗಳಲ್ಲಿ ಹಾಕುವ ಬಗ್ಗೆಯೂ ತೀರ್ಮಾನಿಸಲಾಗಿದೆ.

1. ಜಿಲ್ಲಾ ನ್ಯಾಯಾಲಯ
2. ಜಿಲ್ಲಾಧಿಕಾರಿಗಳ ಕಛೇರಿ

3. ಬಾರ್ ಅಸೋಸಿಯೇಷನ್

4. ಜಿಲ್ಲಾ ಮಟ್ಟದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ (ಡಿಸಿಪಿಯು) ಕಛೇರಿ

5. ಎಲ್ಲಾ ವಿಶ್ವವಿದ್ಯಾಲಯಗಳು

6. ಲಯನ್ಸ್ / ರೋಟರಿ ಸಂಸ್ಥೆಗಳು

7. ಹಾಲಿ ಹುದ್ದೆಯಲ್ಲಿರುವ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಯ ಅಧ್ಯಕ್ಷರು / ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿ, ಸದರಿ ಕಛೇರಿಗಳ ನೋಟೀಸ್ ಬೋರ್ಡ್

8. ರಾಜ್ಯ ಮತ್ತು ಜಿಲ್ಲಾ ಮಟ್ಟದ ಕಾನೂನು ಸೇವಾ ಪ್ರಾಧಿಕಾರ ಕಛೇರಿಗಳ ನೋಟೀಸ್ ಬೋರ್ಡ್

9. ಸ್ವಯಂ ಸೇವಾ ಸಂಸ್ಥೆಗಳ ನೋಟಿಸ್ ಬೋರ್ಡ್

ಸದರಿ ನೋಟಿಫಿಕೇಷನ್‌ನ ಕನ್ನಡ / ಇಂಗ್ಲೀಷ್ ಭಾಷೆಯ ಆವೃತ್ತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ. ಸದರಿ ನೋಟಿಕೇಷನ್‌ನ್ನು ನ್ಯೂಸ್ ಆರ್ಟಿಕಲ್ ರೂಪದಲ್ಲಿ (ಉಚಿತವಾಗಿ) ಸ್ಥಳೀಯ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಿಸಲು ಹಾಗೂ ಮೇಲ್ಕಂಡ ಕಛೇರಿಗಳ ನೋಟೀಸ್ ಬೋರ್ಡ್‌ಗಳಲ್ಲಿ ಹಾಕಲು ಕ್ರಮ ಕೈಗೊಳ್ಳಲು ಸೂಚಿಸಿದೆ ಹಾಗೂ ತೆಗೆದುಕೊಂಡ ಕ್ರಮದ ಬಗ್ಗೆ ಅನುಪಾಲನಾ ಮಾಹಿತಿಯನ್ನು ದಾಖಲಾತಿಯೊಂದಿಗೆ ಈ ಕಛೇರಿಗೆ 5ನೇ ಫೆಬ್ರವರಿ ಒಳಗೆ ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

01.02.2021

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು

ಪ್ರತಿ: ರಾಜ್ಯ ಮಟ್ಟದ ಆಯ್ಕೆ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.